ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಏಕವ್ಯಕ್ತಿ ದುರಸ್ತು ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ

ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

229 (200) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಿಂದ ರೈತರಿಗೆ ಮಂಜೂರಾದ ಜಮೀನುಗಳನ್ನು ದುರಸ್ತು ಮಾಡುವ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಏಕವ್ಯಕ್ತಿ ದುರಸ್ತು ಮಾಡಲು ಅರ್ಜಿ ಪಡೆದು ಮೂರ್ನಾಲ್ಕು ವರ್ಷಗಳಾದರೂ 1 ರಿಂದ 5, 6ರಿಂದ 11 ಹಾಗೂ 11 ಇ ಪ್ರಕ್ರಿಯೆಗಳು ಪೂರ್ಣವಾಗದೆ ರೈತರು ಕಂಗಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ಪ್ರಕರಣಗಳಲ್ಲಿ ತ್ವರಿತವಾಗಿ ಏಕವ್ಯಕ್ತಿ ದುರಸ್ತು ಕಾರ್ಯ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)